



ಅರುಣ ಪಿ. ಭಟ್ಟ

## ವಾರ ಭವಿಷ್ಯ: 26.01.2023ರಿಂದ 01.02.2023ರವರೆಗೆ




ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ಕೆಲವರ ಮಾತನ್ನು ನಂಬಿ ನಷ್ಟದ ವ್ಯವಹಾರದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ ಎಚ್ಚರವಿರಲಿ. ಸಹೋದರ ವಿಶ್ವಾಸಗಳನ್ನು ಪಡೆಯಲು ಪ್ರಯತ್ನಿಸುವುದು ಸೂಕ್ತ. ನಿಮ್ಮ ಬಹುಕಾಲದ ವ್ಯಾಜ್ಯಗಳಿಗೆ ಸೂಕ್ತ ಪರಿಹಾರಗಳು ದೊರಕಲಿದೆ. ಮೋಜು ಮಸ್ತಿಗಳಿಗಾಗಿ ವಿಶೇಷ ಆಮಂತ್ರಣಗಳು ಹೆಚ್ಚಾಗುವ ಸಾಧ್ಯತೆ ಇದೆ. ಶುಭದಿನ: 27. ವಿಷ್ಣು ಸಹಸ್ರನಾಮ ಪಠಿಸಿರಿ.

---

ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶಗಳು ಸಿಗಲಿವೆ. ಬ್ಯಾಂಕಿಂಗ್ ವ್ಯವಹಾರಗಳು ಯೋಜಿತವಾಗಿ ನಡೆಯಲಿದೆ. ಕಷ್ಟದ ಕಾರ್ಯಗಳನ್ನು ಸಹ ಅನಾಯಾಸವಾಗಿ ಮಾಡಿ ಮುಗಿಸಲಿದ್ದೀರಿ. ಕುಟುಂಬದಲ್ಲಿ ಶುಭಸುದ್ದಿ ಬರಲಿದೆ. ಅವಿವಾಹಿತರಿಗೆ ವಿವಾಹದ ಯೋಗ ಸಾಧ್ಯತೆ ಕಾಣಬಹುದಾಗಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ಶುಭದಿನ: 26. ಹನುಮಾನ್ ಚಾಲಿಸ್ ಪಠಿಸಿರಿ.




---




ಆತ್ಮೀಯ ವ್ಯಕ್ತಿಗಳೊಡನೆ ವಿವಾದಗಳು ಹೆಚ್ಚಾಗಬಹುದು. ಭೂಮಿಗೆ ಸಂಬಂಧಪಟ್ಟಂತಹ ವ್ಯಾಜ್ಯಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಅನಗತ್ಯವಾಗಿ ಮಾತಿನಲ್ಲಿ ಏನಾದರೂ ಹೇಳಿ ಸಿಲುಕಬೇಡಿ. ಕೆಲಸದ ವಿಷಯದಲ್ಲಿ ಸಮಸ್ಯೆಗಳು ಉದ್ಭವ ಆಗಲಿದೆ. ಆದಷ್ಟು ಸಮಸ್ಯೆಗಳನ್ನು ಆ ಕ್ಷಣದಲ್ಲೇ ಬಗೆಹರಿಸಲು ಪ್ರಯತ್ನಿಸಿ. ಒತ್ತಡದಿಂದ ಹೊರ ಬನ್ನಿ. ಶುಭದಿನ: 28. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.

---

ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತವಾದ ಕಾರ್ಯಶೈಲಿ ಕಂಡುಬರುತ್ತದೆ. ಧನಾಗಮನ ವ್ಯವಸ್ಥೆ ಸರಾಗವಾಗಿ ನಡೆಯಲಿದೆ. ಲೇವಾದೇವಿ ವ್ಯವಹಾರಗಳಿಂದ ದೂರವಿರುವುದು ಲೇಸು. ಪ್ರೇಕ್ಷಣೀಯ ಸ್ಥಳಗಳು ಭೇಟಿ ಮಾಡುವ ಸಾಧ್ಯತೆ ಇದೆ. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ಶುಭದಿನ: 29. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




---




ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ನಿಮ್ಮ ಆಲೋಚನೆ ಅಥವಾ ಮನಸ್ಥಿತಿಯನ್ನು ಕ್ಷುಲ್ಲಕ ವಿಚಾರಗಳಿಗೆ ಹರಿಸಬೇಡಿ. ಇದು ನಿಮ್ಮ ಜೀವನಕ್ಕೆ ಮಾರಕ ಆಗಬಹುದು. ಪತ್ನಿಯ ವಿಚಾರಕ್ಕೆ ಸಹಮತನೀಡಿ. ಆರ್ಥಿಕವಾಗಿ ಸಂತೃಪ್ತಿಯ ಭಾವನೆ ಮೂಡಲಿದೆ. ಶುಭದಿನ: 29. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

---

ಬಹುಮುಖ್ಯ ಕೆಲಸವನ್ನು ನೀವು ಮರೆತುಬಿಡಬಹುದು ಆದಷ್ಟು ಕಾರ್ಯಗಳ ಬಗ್ಗೆ ಸೂಕ್ತ ಮುತುವರ್ಜಿವಹಿಸಿ. ಆರೋಗ್ಯದ ಹಿತದೃಷ್ಟಿಯನ್ನು ಮನಗಾಣಿರಿ. ಹೆಚ್ಚಿನ ಕೆಲಸ ಹಾಗೂ ಹೊಸ ಆದಾಯ ಮಾರ್ಗ ಕಂಡುಬರಲಿದೆ. ನವೀನವಾಗಿ ಪ್ರಾರಂಭ ಮಾಡಿರುವ ಉದ್ಯೋಗ ಭರವಸೆಯ ಮಹಾಪೂರವನ್ನೇ ತರಲಿದೆ. ಮುನಿಸಿಕೊಂಡ ದಂಪತಿ ಹತ್ತಿರವಾಗುವ ಸಮಯವಿದು. ಶುಭದಿನ: 30. ಆದಿತ್ಯ ಹೃದಯ ಪಠಿಸಿರಿ.




---




ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಆರ್ಥಿಕವಾಗಿ ಬಳಲುವಿಕೆ ಈ ವಾರ ಕಂಡುಬರಲಿದೆ. ಸಾಲದ ಬಾಧೆ ನಿಮ್ಮ ಸಮಸ್ಯೆಗಳಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ. ವ್ಯವಹಾರದಲ್ಲಿ ಅಲಕ್ಷತನ ಹೆಚ್ಚಾಗಬಹುದು. ಕಟ್ಟಡ ಕಾಮಗಾರಿಗಳಲ್ಲಿ ಹಣಕಾಸಿನ ಕುಂದುಕೊರತೆ ಕಾಡಲಿದೆ. ದೈವ ಸಂಕಲ್ಪದ ಮೊರೆಹೋಗುವ ಸಾಧ್ಯತೆ ಕಂಡು ಬರಲಿದೆ. ಶುಭದಿನ: 28. ಚಂಡಿ ಪಾರಾಯಣ ಮಾಡಿರಿ.

---

ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ನಿಮ್ಮ ನಿರೀಕ್ಷೆಗಳಂತೆ ಆರ್ಥಿಕವಾಗಿ ಪ್ರಬಲರಾಗುವ ಸಾಧ್ಯತೆ ಕಂಡುಬರುತ್ತದೆ. ವಿದ್ಯಾರ್ಥಿಗಳಿಗೆ ಉತ್ತಮ ನಿರೀಕ್ಷೆಗಳು ಮೂಡಲಿದೆ. ಶುಭದಿನ: 27. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




---




ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಕುಟುಂಬದಲ್ಲಿ ಅಶಾಂತಿಯ ವಾತಾವರಣ ಗೋಚರವಾಗಲಿದೆ. ಕೆಲವು ವ್ಯಕ್ತಿಗಳಿಂದ ನಿಮ್ಮ ಕಾರ್ಯಗಳಲ್ಲಿ ಹಸ್ತಕ್ಷೇಪ ಕಂಡುಬರುತ್ತದೆ. ಉದ್ಯಮದಲ್ಲಿ ಹಿನ್ನಡೆ ಆಗಬಹುದಾದ ಸಾಧ್ಯತೆ ಉಂಟು. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಶುಭದಿನ: 28. ಕಾಲಭೈರವನ ಸೇವೆ ಮಾಡಿರಿ.

---

ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಕಥೆ, ಕವನ ಅಥವಾ ಸಾಹಿತ್ಯ ಚಟುವಟಿಕೆಗಳಲ್ಲಿ ಉತ್ತಮ ಮನ್ನಣೆ ಗಳಿಸಲಿದ್ದೀರಿ. ಕೆಲವು ಅದೃಷ್ಟದ ಭಾಗ್ಯಗಳು ಒದಗಿಬರಲಿದೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಕೋರ್ಟ್ ವ್ಯವಹಾರಗಳು ನಿಮ್ಮ ಪರವಾಗಿ ಆಗುವ ಸಾಧ್ಯತೆ ಇದೆ. ಶುಭದಿನ: 27. ಸೌಂದರ್ಯ ಲಹರಿ ಪಠಿಸಿರಿ.




---




ಅಪರಿಚಿತ ವ್ಯಕ್ತಿಗಳಿಂದ ನಿಮ್ಮ ಯೋಜನೆಗಳಲ್ಲಿ ನಷ್ಟವಾಗಬಹುದು. ನಂಬಿಕೆ ದ್ರೋಹದಂತಹ ಚಟುವಟಿಕೆಗಳು ನಡೆಯಲಿದ್ದು ಎಚ್ಚರದಿಂದಿರಿ. ವಾಹನದಲ್ಲಿ ಜಾಗ್ರತೆ ವಹಿಸುವುದು ಸೂಕ್ತ. ಪತ್ನಿಯೊಡನೆ ಅತಿ ಹೆಚ್ಚು ಕೋಪ ಕಲಹಗಳಲ್ಲಿ ಪಾಲ್ಗೊಳ್ಳಬೇಡಿ. ನಿಮ್ಮೆಲ್ಲಾ ಕೆಲಸಗಳಿಗೆ ತಾಳ್ಮೆ ಅತ್ಯವಶ್ಯ. ಆರೋಗ್ಯ ಸಾಧಾರಣವಾಗಿ ಇರುತ್ತದೆ. ದೈಹಿಕ ಆರೋಗ್ಯ ಸಮಸ್ಯೆ ಕಾಡಬಹುದು. ಶುಭದಿನ: 26. ಕನಕಧಾರಾ ಸ್ತೋತ್ರ ಪಠಿಸಿರಿ.

---

ಯೋಜನೆಗಳ ಫಲಿತಾಂಶ ವಿಳಂಬವಾಗುವ ಸಾಧ್ಯತೆ ಇದೆ. ಕೆಲಸಕಾರ್ಯಗಳಲ್ಲಿ ನಿಮ್ಮ ಪಾಲ್ಗೊಳ್ಳುವಿಕೆ ಉತ್ತಮವಾಗಲಿದೆ. ಕಲಿಕೆಯ ವಿಷಯ ಆಸಕ್ತಿ ಉತ್ತಮ ಮಟ್ಟದಲ್ಲಿ ಇರಲಿದೆ. ಸ್ನೇಹಿತರ ಜೊತೆಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಮುಂದಾಗಿ. ಆರ್ಥಿಕ ಸ್ಥಿತಿಯಲ್ಲಿ ಮಧ್ಯಮ ಗತಿಯಲ್ಲಿ ನಡೆಯಲಿದೆ. ಪರಸ್ಥಳ ವಾಸ ಅನುಭವಿಸಬೇಕಾದ ಸಂದರ್ಭ ಬರಬಹುದು. ಶುಭದಿನ: 27. ಚಂಡಿ ಪಾರಾಯಣ ಮಾಡಿರಿ.

